ಅಪೆಂಡಿಕ್ಸ್–ಇ ಯೋಜನೆಯಡಿ 60.00 ಲಕ್ಷ ರೂಪಾಯಿಗಳ ವೆಚ್ಚದಲ್ಲಿ ನೂತನ ಕಟ್ಟಡವನ್ನು ಸಹ ನಿರ್ಮಿಸಲಾಗಿದೆ.

ಸರ್ಕಾರಿ ಪದವಿ ಪೂರ್ವ ಕಾಲೇಜು, ಟೆಂಗಳಿ, ಚಿಂಚೋಳಿ ತಾಲ್ಲೂಕು ಗುಲ್ಬರ್ಗಾ ಜಿಲ್ಲೆ ಈ ಕಾಲೇಜಿಗೆ ನಬಾರ್ಡ್ ಸಹಯೋಗದ ಆರ್‌ಐಡಿಎಫ್–13ರ ಯೋಜನೆಯಡಿ 54.08 ಲಕ್ಷರೂಗಳ ವೆಚ್ಚದಲ್ಲಿ ಪೂರ್ನ ಕಟ್ಟಡವನ್ನು ನಿರ್ಮಿಸಲು ಅನುಮತಿಯನ್ನು ನೀಡಲಾಗಿತ್ತು. ಆದರೆ ಮಣ್ಣಿನ ಕ್ಷಮಾಧಾರಣ ಶಕ್ತಿಯು ಕಡಿಮೆಯಿದ್ದ ಹಿನ್ನೆಲೆಯಲ್ಲಿ ನಿಗಧಿಪಡಿಸಿರುವ ಮೊತ್ತವು ಕಡಿಮೆಯಾಗಿದ್ದು, ಕಾಮಗಾರಿಯನ್ನು ಕೈಬಿಡಲಾಯಿತು. ಸರ್ಕಾರದ ಆದೇಶ ಸಂಖ್ಯೆ: ಇಡಿ 88 ಯೋಸಕ 2014. ದಿನಾಂಕ: 13–11–2014ರಲ್ಲಿ 17.00 ಲಕ್ಷರೂಪಾಯಿಗಳನ್ನು ನಿಗಧಿಗೊಳಿಸಿದ್ದು, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಗೆ ಕಾಮಗಾರಿಯನ್ನು ಅನುಷ್ಟಾನಗೊಳಿಸಲು ತಿಳಿಸಲಾಗಿದೆ.

ಸರ್ಕಾರಿ ಪದವಿ ಪೂರ್ವ ಕಾಲೇಜು, ರೇವಗ್ಗಿ, ಚಿಂಚೋಳಿ ತಾಲ್ಲೂಕು, ಗುಲ್ಬರ್ಗಾ ಜಿಲ್ಲೆ ಈ ಕಾಲೇಜಿಗೆ ನಬಾರ್ಡ್ ಸಹಯೋಗದ ಆರ್‌ಐಡಿಎಫ್–12ರ ಯೋಜನೆಯಡಿ 36.00 ಲಕ್ಷರೂಗಳ ಅಂದಾಜು ವೆಚ್ಚದಲ್ಲಿ ಪೂರ್ಣ ಕಟ್ಟಡವನ್ನು ನಿರ್ಮಿಸಲಾಗಿದೆ. ಸದರಿ ಕಟ್ಟಡದಲ್ಲಿ ಕಾಲೇಜು ನಡೆಯುತ್ತಿದೆ.

ಖಾಸಗಿ ಇಂಜಿನೀಯರ್ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವುದು

2454(2181); ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)

ಅ) ಹೈದರಾಬಾದ್–ಕರ್ನಾಟಕ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳ ಸಂಖ್ಯೆ ಎಷ್ಟು; ಅವುಗಳು ಯಾವುವು; ಈ ಕಾಲೇಜುಗಳು ಎಷ್ಟು ವರ್ಷದಿಂದ ಕಾರ್ಯನಿರ್ವಹಿಸುತ್ತಿವೆ: (ಕಾಲೇಜುವಾರು ವಿವರ ಒದಗಿಸುವುದು)

ಆ) ಈ ಭಾಗದ ಜಿಲ್ಲೆಗಳು ಶೈಕ್ಷಣಿಕವಾಗಿ ಅತ್ಯಂತ ಹಿಂದುಳಿದ್ದು 1987ಕ್ಕಿಂತ ಪೂರ್ವದಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳನ್ನು ವೇತನಾನುದಾನಕ್ಕೊಳಪಡಿಸಿದೆಯೆ: ಇಲ್ಲವಾದ್ದಲ್ಲಿ ಕಾರಣಗಳೇನು ಈ ಸಂಬಂಧವಾಗಿ ಇಲ್ಲಿಯವರೆವಿಗೆ ಸರ್ಕಾರಕ್ಕೆ ಬಂದಿರುವ ಪ್ರಸ್ತಾವನೆಗಳೆಷ್ಟು;

ಇ) ಈ ಭಾಗದ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳು, ತೀವ್ರವಾದ ಆರ್ಥಿಕ ನಷ್ಟವನ್ನು ಎದುರಿಸುತ್ತಿರುವುದನ್ನು ಪರಿಗಣಿಸಿ 1987ಕ್ಕಿಂತ ಮೊದಲಿನಿಂದ ಕಾರ್ಯನಿರ್ವಹಿಸುತ್ತಿರುವ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರು)

ಅ) ಹೈದರಾಬಾದ್ ಕರ್ನಾಟಕ ಪ್ರದೇಶದ ವ್ಯಾಪ್ತಿಯಲ್ಲಿ ಒಟ್ಟು 15 ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳು ಅಸ್ಥಿತ್ವದಲ್ಲಿವೆ. ಕಾಲೇಜುವಾರು ಮಾಹಿತಿಯನ್ನು ಅನುಬಂಧ–1 ರಲ್ಲಿ ನೀಡಿದೆ.

ಆ) ಹೈದರಬಾದ್ ಕರ್ನಾಟಕ ಪ್ರದೇಶದ ವ್ಯಾಪ್ತಿಯಲ್ಲಿನ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳ ಪೈಕಿ 1987ಕ್ಕಿಂತ ಪೂರ್ವದಲ್ಲಿ ಪ್ರಾರಂಭಗೊಂಡಿರುವ ಈ ಕೆಳಕಂಡ ಇಂಜಿನಿಯರಿಂಗ್ ಕಾಲೇಜುಗಳ ಕೋರ್ಸುಗಳನ್ನು ವೇತನಾನುದಾನಕ್ಕೊಳಪಡಿಸುವ ಕುರಿತಂತೆ ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ.

1. ಭೀಮಣ್ಣ ಖಂಡ್ರೆ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ (ಭಾಲ್ಕಿ)
2. ಹೆಚ್.ಕೆ.ಇ. ಶಿಕ್ಷಣ ಸಂಸ್ಥೆಯ ಎಸ್‌ಎಲ್.ಎನ್. ಇಂಜಿನಿಯರಿಂಗ್ ಕಾಲೇಜು, ರಾಯಚೂರು
3. ಪಿ.ಡಿ.ಎ. ಇಂಜಿನಿಯರಿಂಗ್ ಕಾಲೇಜು, ಕಲಬುರ್ಗಿ (ಅನುದಾನಿತ ಇಂಜಿನಿಯರಿಂಗ್ ಕಾಲೇಜು)
4. ವೀರಶೈವ ವಿದ್ಯಾವರ್ಧಕ ಸಂಘದ ರಾವ ಬಹದ್ದೂರ್ ಮಹಾಬಲೇಶ್ವರ ತಾಂತ್ರಿಕ ಮಹಾವಿದ್ಯಾಲಯ, ಬಳ್ಳಾರಿ

ಈ) ಮೇಲಿನ "ಆ" ರಲ್ಲಿ ಮಾಹಿತಿಯಂತೆ

ಅನುಬಂಧ-1

ಹೈದರಾಬಾದ್ ಕರ್ನಾಟಕ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳ ವಿವರ

ಕ್ರಮ ಸಂಖ್ಯೆ	ಖಾಸಗಿ ಇಂಜಿನಿಯರಿಂಗ್ ಕಾಲೇಜು ಹೆಸರು	ಪ್ರಾರಂಭಿಸಲಾದ ವರ್ಷ
	ಬೀದರ್ ಜಿಲ್ಲೆ	
1	ಗುರುನಾನಕ್ ದೇವ್ ಇಂಜಿನಿಯರಿಂಗ್ ಕಾಲೇಜು. ಬೀದರ್ (ಮತೀಯ ಅಲ್ಪಸಂಖ್ಯಾತ)	1980
2	ಬಸವಕಲ್ಯಾಣ ಇಂಜಿನಿಯರಿಂಗ್ ಕಾಲೇಜು. ಬಸವಕಲ್ಯಾಣ	1999
3	ಭೀಮಣ್ಣ ಖಂಡ್ರೆ ರೂರಲ್ ಇಂಜಿನಿಯರಿಂಗ್ ಕಾಲೇಜು. ಭಾಲ್ಕಿ	1982
4	ಆಂಗರಾಜಪ್ಪ ಇಂಜಿನಿಯರಿಂಗ್ ಕಾಲೇಜು. ಬೀದರ್	2011
	ಬಳ್ಳಾರಿ ಜಿಲ್ಲೆ	
5	ಬಳ್ಳಾರಿ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜ & ಮ್ಯಾನೇಜ್‌ಮೆಂಟ್. ಬಳ್ಳಾರಿ	1987
6	ಪ್ರೌಢದೇವರಾಯ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ. ಹೊಸಪೇಟೆ	1997
7	ರಾವ್ ಬಹದ್ದೂರ್ ವೈ ಮಹಬಲೇಶ್ವರಪ್ಪ ಇಂಜಿನಿಯರಿಂಗ್ ಕಾಲೇಜು ಬಳ್ಳಾರಿ	1980
	ರಾಯಚೂರು ಜಿಲ್ಲೆ	
8	ನವೋದಯ ಇನ್ಸ್ಟಿಟ್ಯೂಟರ್ ಆಫ್ ಟೆಕ್ನಾಲಜಿ. ರಾಯಚೂರು	2008
9	ಎಸ್.ಎಲ್.ಎನ್ ಕಾಲೇಜ್ ಆಫ್ ಇಂಜಿನಿಯರಿಂಗ್. ರಾಯಚೂರು	1979
	ಕಲಬುರ್ಗಿ ಜಿಲ್ಲೆ	
10	ಕೆ.ಸಿ.ಟಿ ಇಂಜಿನಿಯರಿಂಗ್ ಕಾಲೇಜು. ಕಲಬುರ್ಗಿ (ಮತೀಯ ಅಲ್ಪಸಂಖ್ಯಾತ)	2001
11	ಖಾಜಾ ಬಂಡೆ ನವಾಜ್ ಕಾಲೇಜ್ ಆಫ್ ಇಂಜಿನಿಯರಿಂಗ್. ಕಲಬುರ್ಗಿ (ಮತೀಯ ಅಲ್ಪಸಂಖ್ಯಾತ)	1982
12	ಅಪ್ಪ ಇನ್ಸ್ಟಿಟ್ಯೂಟ್ ಆಫ್ ಇಂಜಿನಿಯರಿಂಗ್ & ಟೆಕ್ನಾಲಜ. ಕಲಬುರ್ಗಿ	2002
13	ಶೆಟ್ಟಿ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜ. ಕಲಬುರ್ಗಿ	2011
14	ಗೋದುತಾಯಿ ಮಹಿಳಾ ಇಂಜಿನಿಯರಿಂಗ್ ಕಾಲೇಜು. ಕಲಬುರ್ಗಿ	2011
	ಯಾದಗಿರಿ ಜಿಲ್ಲೆ	
15	ವೀರಪ್ಪ ನಿಷ್ಟಿ ಇಂಜಿನಿಯರಿಂಗ್ ಕಾಲೇಜು. ಶೋಲಪುರ. ಯಾದಗಿರಿ	2010

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು.
4/3/15